सत्यमेव जयते

# ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ಸಂಖ್ಯೆ:ರಾಚುಆ:05:ಇಜಿಪಿ/2020.

ನಂ.8, 1ನೇ ಮಹಡಿ, ಕರ್ನಾಟಕ ರಾಜ್ಯ ಸಹಕಾರ
ಮಾರಾಟ ಮಂಡಳಿ ಕಟ್ಟಡ (ಹಿಂಭಾಗ),
ಕನ್ನಿಂಗ್‌ಹ್ಯಾಮ್ ರಸ್ತೆ, ಬೆಂಗಳೂರು-560 052,
ದಿನಾಂಕ: 11.01.2020.

## -: ಪತ್ರಿಕಾ ಪ್ರಕಟಣೆ :-

2020ನೇ ಸಾಲಿನಲ್ಲಿ ಗ್ರಾಮ ಪಂಚಾಯತಿಗಳ ಸಾರ್ವತ್ರಿಕ ಚುನಾವಣೆಯನ್ನು ಏಪ್ರಿಲ್ 5 ಮತ್ತು ಏಪ್ರಿಲ್ 9 ಕ್ಕೆ ಚುನಾವಣೆ ನಡೆಸಲಾಗುತ್ತಿದೆ ಎಂದು, ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರೌಢ ಶಿಕ್ಷಣದಲ್ಲಿ ಉತ್ತೀರ್ಣರಾಗಿರಬೇಕು, ಆಧಾರ ಕಾರ್ಡ್ ಮತ್ತು ಪಾನ್ ಕಾರ್ಡ್‌ಗಳನ್ನು ಕರ್ನಾಟಕದಲ್ಲಿ ಹೊಂದಿರಬೇಕೆಂಬ ಇತ್ಯಾದಿ ನಮೂದಿಸಿ ರಾಜ್ಯ ಚುನಾವಣಾ ಆಯೋಗವು ಆದೇಶಿಸಿದೆ ಎಂಬ ಅರ್ಥದಲ್ಲಿ ನಕಲಿ ರಾಜ್ಯಪತ್ರವನ್ನು ಸೃಷ್ಟಿಸಿ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಟ್ಟಿರುವುದು ರಾಜ್ಯ ಚುನಾವಣಾ ಆಯೋಗದ ಗಮನಕ್ಕೆ ಬಂದಿರುತ್ತದೆ.

ಆಯೋಗವು ಗ್ರಾಮ ಪಂಚಾಯತಿ ಸಾರ್ವತ್ರಿಕ ಚುನಾವಣೆ ಸಂಬಂಧದಲ್ಲಿ ಇದುವರೆಗೆ ಯಾವುದೇ ದಿನಾಂಕವನ್ನು ಗೊತ್ತುಪಡಿಸಿರುವುದಿಲ್ಲ ಹಾಗೂ ಇಂತಿಷ್ಟೆ ಶಿಕ್ಷಣವನ್ನು ಹೊಂದಿರಬೇಕು ಹಾಗೂ ಇಂತಿಷ್ಟೆ ಮಕ್ಕಳನ್ನು ಹೊಂದಿರಬೇಕು ಎಂಬ ಬಗ್ಗೆ ಯಾವುದೇ ಆದೇಶವನ್ನು ಹೊರಡಿಸಿರುವುದಿಲ್ಲ. ಆದುದರಿಂದ, ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ರಾಜ್ಯ ಚುನಾವಣಾ ಆಯೋಗದ ಹೆಸರಿನಲ್ಲಿರುವ ಆದೇಶವು ನಕಲಿಯಾಗಿರುತ್ತದೆ. ಎಂಬ ಅಂಶವನ್ನು ಸಾರ್ವಜನಿಕರ ಗಮನಕ್ಕೆ ಈ ಮೂಲಕ ಪ್ರಕಟಿಸಲಾಗಿದೆ.

STATE ELECTION COMMISSION
सत्यमेव जयते
★ KARNATAKA ★

ಆದೇಶದ ಮೇರೆಗೆ,

11/01/2020

ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ.

ಅಧೀನ ಕಾರ್ಯದರ್ಶಿ
ರಾಜ್ಯ ಚುನಾವಣಾ ಆಯೋಗ, ಕರ್ನಾಟಕ

ರವರಿಗೆ:

1. ನಿರ್ದೇಶಕರು/ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಬೆಂಗಳೂರುರವರಿಗೆ ಕಳುಹಿಸುತ್ತಾ ಪತ್ರಿಕಾ ಪ್ರಕಟಣೆಯನ್ನು ಸರ್ಕಾರಕ್ಕೆ ವೆಚ್ಚ ಬಾರದಂತೆ ಈ ಕೂಡಲೇ ವ್ಯಾಪಕ ಪ್ರಚಾರ ನೀಡುವಂತೆ ಕ್ರಮ ಕೈಗೊಳ್ಳಲು ಕೋರಿದೆ.
2. ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಕ್ತ ಕ್ರಮಕ್ಕಾಗಿ.
3. ಶ್ರವಣ, ದೃಶ್ಯ ಮತ್ತು ಪತ್ರಿಕಾ ಮಾಧ್ಯಮ ಮೇಲ್ಕಂಡ ಪತ್ರಿಕಾ ಪ್ರಕಟಣೆಯನ್ನು ಸುದ್ದಿ ಮಾಧ್ಯಮದಲ್ಲಿ ಪ್ರಚುರಪಡಿಸಲು ವಿನಂತಿಸಿದೆ.

D:\MJ\JP\SEC-3-EGP-2020 - Copy.docx